# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 03-04-2021 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು.
4. ಶ್ರೀ ನಂಜುಂಡಯ್ಯ, ಸಹಾಯಕ ಅಭಿಯಂತರರು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ.
5. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು.
6. ಶ್ರೀ ಶ್ರೀನಿವಾಸ್, ಕಂದಾಯ ನಿರೀಕ್ಷಕರು.
7. ಶ್ರೀ ಜೋಶ್ವಾ, ಕರ ವಸೂಲಿಗಾರರು.
8. ಶ್ರೀ ಕಾರ್ತಿಕ್, ಸಹಾಯಕ ಅಭಿಯಂತರರು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ.
9. ಶ್ರೀ ಮುರಳೀಧರ, ಸ್ಥಳೀಯರು.

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಮುರಳೀಧರ್, ಸ್ಥಳೀಯರು ಮಾತನಾಡುತ್ತಾ,** ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ಪಾದಾಚಾರಿ ಮಾರ್ಗದಲ್ಲಿ ಬೀದಿ ವ್ಯಾಪಾರಿಗಳು ಹೆಚ್ಚಾಗಿದ್ದು, ಇದರಿಂದ ಕೋವಿಡ್ ಸೋಂಕು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಕೂಡಲೇ ಬೀದಿ ವ್ಯಾಪಾರಿಗಳನ್ನು ಸ್ಥಳದಿಂದ ತೆರವುಗೊಳಿಸಬೇಕೆಂದು ಹಾಗೂ ಕಮ್ಮನಹಳ್ಳಿ ಮುಖ್ಯರಸ್ತೆಯ ಚರಂಡಿ ಹಾಗೂ ಪಾದಾಚಾರಿ ಮಾರ್ಗವನ್ನು ಅಭಿವೃದ್ಧಿಪಡಿಸಬೇಕೆಂದು ತಿಳಿಸಿದರು ಹಾಗೂ ಕೋವಿಡ್ ಸೋಕು ಹೆಚ್ಚಾಗುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ವ್ಯಾಕ್ಸಿನೇಷನ್ ಸೆಂಟರ್ ಇಲ್ಲದೇ ಇರುವುದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ವಾರ್ಡ್ ವ್ಯಾಪ್ತಿಯಲ್ಲಿ ವ್ಯಾಕ್ಸಿನೇಷನ್ ಸೆಂಟರ್ ತೆರೆದರೆ ಅನುಕೂಲವಾಗುವುದೆಂದು ಸಭೆಯಲ್ಲಿ ತಿಳಿಸಿದರು.

2) **ಮಾನ್ಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ಮಾತನಾಡಿ,** ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ಶುಕ್ರವಾರ ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿರುವ ಪಾದಾಚಾರಿ ಮಾರ್ಗದಲ್ಲಿ ಇಟ್ಟಿರುವ ಪೆಟ್ಟಿ ಅಂಗಡಿ ಹಾಗೂ ಒತ್ತುವರಿಯನ್ನು ತೆರವು ಕಾರ್ಯಾಚರಣೆಯನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರಿಗೆ ತಿಳಿಸಿದರು ಹಾಗೂ ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ

ಬ್ಲಾಕ್‌ಸ್ಪಾಟ್‌ಗಳನ್ನು ಆಗಿಂದ್ದಾಗ್ಗೆ ತೆರವುಗೊಳಿಸಿ, ಶುಚಿತ್ವ ಕಾಪಾಡಲು ಕ್ರಮ ವಹಿಸಲು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿರುವ ಹಿರಿಯ ನಾಗರೀಕರು ಹಾಗೂ ವ್ಯಾಕ್ಸಿನೇಷನ್ ಅವಶ್ಯಕತೆ ಇರುವ ಸಾರ್ವಜನಿಕರು ಕಡ್ಡಾಯವಾಗಿ ವ್ಯಾಕ್ಸಿನೇಷನ್ ಪಡೆಯಲು ಅರಿವು ಮೂಡಿಸಲು ಕ್ರಮ ವಹಿಸಲು ಆರೋಗ್ಯ ನಿರೀಕ್ಷಕರಿಗೆ ತಿಳಿಸಿದರು. ಹಾಗೂ ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

**ನೋಡಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

ಪ್ರತಿಯನ್ನು

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರೆರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
11) ಸಹಾಕಯ ಕಂದಾಯ ಅಧಿಕಾರಿ. ಮಾರುತಿ ಸೇವಾ ನಗರ ಉಪವಿಭಾಗ
12) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
13) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
14) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
15) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
16) ಕಛೇರಿ ಪ್ರತಿ.